# All India Radio: Bangalore
# National Bulletin In Kannada
# 28.05.2025  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಹದಿನಾಲ್ಕು ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ; ಕೇಂದ್ರ ಸಂಪುಟ ಸಮಿತಿ ಅನುಮೋದನೆ
2. ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನ ಸಿಕ್ಕಿಂ, ಪಶ್ಚಿಮ ಬಂಗಾಳ, ಬಿಹಾರ ಮತ್ತು ಉತ್ತರಪ್ರದೇಶಗಳಿಗೆ ಪ್ರವಾಸ
3. ಮಹತ್ವಾಕಾಂಕ್ಷೆಯ 'ವಿಕಸಿತ ಕೃಷಿ ಸಂಕಲ್ಪ' ಅಭಿಯಾನ ದೇಶಾದ್ಯಂತ ನಾಳೆಯಿಂದ ಪ್ರಾರಂಭ
4. ಪಾಕಿಸ್ತಾನ ಗಡಿ ಜಿಲ್ಲೆಗಳಲ್ಲಿ ನಾಳೆ ನಾಗರಿಕ ರಕ್ಷಣಾ ಅಣಕು ಕವಾಯತು
5. ಸಿಂಗಾಪುರ ಓಪನ್ ಸೂಪರ್ ೭೫೦ ಬ್ಯಾಡ್ಮಿಂಟನ್ ಟೂರ್ನಿ ; ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ-ಚಿರಾಗ್ ಶೆಟ್ಟಿ ಜೋಡಿಗೆ ಗೆಲುವು

<><><><>

೨೦೨೫-೨೬ರ ಮಾರುಕಟ್ಟೆ ಋತುವಿಗಾಗಿ ೧೪ ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ - ಎಂಎಸ್‌ಪಿಯನ್ನು ಕೇಂದ್ರ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಅನುಮೋದಿಸಿದೆ. ಅಖಿಲ ಭಾರತ ಸರಾಸರಿ ಉತ್ಪಾದನಾ ವೆಚ್ಚದ ಕನಿಷ್ಠ ೧.೫ ಪಟ್ಟು ಮಟ್ಟದಲ್ಲಿ ಮುಂಗಾರು ಬೆಳೆಗಳಿಗೆ ಎಂಎಸ್‌ಪಿ ಹೆಚ್ಚಳ ಮಾಡಲಾಗಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಮಾಹಿತಿ ಹಾಗೂ ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಕೃಷಿಕರಿಗೆ ಲಾಭದಾಯಕ ಬೆಲೆ ಒದಗಿಸಲು ಕೇಂದ್ರ ಸರ್ಕಾರ ಮುಂಗಾರು ಬೆಳೆಗಳ ಎಂಎಸ್‌ಪಿ ಹೆಚ್ಚಿಸಿರುವುದಾಗಿ ತಿಳಿಸಿದ್ದಾರೆ. ಈ ವರ್ಷ ಪ್ರತಿ ಕ್ವಿಂಟಾಲ್ ಹುಚ್ಚೆಳ್ಳು ಬೀಜಕ್ಕೆ ೮೨೦ ರೂಪಾಯಿ ನಿಗದಿಪಡಿಸಲಾಗಿದ್ದರೆ, ಪ್ರತಿ ಕ್ವಿಂಟಾಲ್ ರಾಗಿಗೆ ೫೯೬ ರೂಪಾಯಿ, ಹತ್ತಿಗೆ ೫೮೯ ರೂಪಾಯಿ, ಮತ್ತು ಎಳ್ಳು ೫೭೯ ರೂಪಾಯಿ ನಿಗದಿಪಡಿಸಲಾಗಿದೆ.

**ಧ್ವನಿ : ಅಶ್ವಿನಿ ವೈಷ್ಣವ್**

೨೦೨೫-೨೬ನೇ ಹಣಕಾಸು ವರ್ಷಕ್ಕೆ ಪರಿಷ್ಕೃತ ಬಡ್ಡಿ ಸಹಾಯಧನ ಯೋಜನೆ ಎಂಐಎಸ್‌ಎಸ್ ಅನ್ನು ಹಾಲಿ ಇರುವ ಶೇಕಡಾ ೧.೫ರ ಬಡ್ಡಿ ಸಹಾಯಧನ - ಐಎಸ್ ದೊಂದಿಗೆ ಮುಂದುವರಿಸಲು ಕೇಂದ್ರ ಸಂಪುಟ ಅನುಮೋದನೆ ನೀಡಿದೆ ಮತ್ತು ಅಗತ್ಯವಿರುವ ನಿಧಿ ವ್ಯವಸ್ಥೆ ಮಾಡಲೂ ಸಹ

ಸಮ್ಮತಿಸಿದೆ. ಕಿಸಾನ್ ಕ್ರೆಡಿಟ್ ಕಾರ್ಡ್ ಮೂಲಕ ರೈತರು ೩ ಲಕ್ಷ ರೂಪಾಯಿಯವರೆಗೆ ಸಾಲವನ್ನು ಶೇಕಡಾ ೭ ರಷ್ಟು ಬಡ್ಡಿದರದಲ್ಲಿ ಪಡೆಯುತ್ತಾರೆ. ಸರಿಯಾಗಿ ಸಾಲ ಪಾವತಿ ಮಾಡಿದ ರೈತರಿಗೆ ಹೆಚ್ಚುವರಿ ಶೇಕಡಾ ೩ ರಿಯಾಯಿತಿ ದೊರೆಯಲಿದೆ, ಇದರಿಂದಾಗಿ ಅವರ ಬಡ್ಡಿದರ ಕೇವಲ ಶೇಕಡಾ ೪ ರಷ್ಟಾಗಲಿದೆ. ಪಶುಪಾಲನೆ ಅಥವಾ ಮೀನುಗಾರಿಕೆಗೆ ಪಡೆದಿರುವ ೨ ಲಕ್ಷ ರೂಪಾಯಿವರೆಗಿನ ಸಾಲಗಳಿಗೂ ಇದೇ ಬಡ್ಡಿದರ ಸೌಲಭ್ಯ ಅನ್ವಯವಾಗುತ್ತದೆ. ಸಂಪುಟ ಸಭೆಯಲ್ಲಿ ಮಹಾರಾಷ್ಟ್ರ ಮತ್ತು ಮಧ್ಯಪ್ರದೇಶ ರಾಜ್ಯಗಳಲ್ಲಿ ಭಾರತೀಯ ರೈಲ್ವೆಯಲ್ಲಿನ ಎರಡು ಮಲ್ಟಿಟ್ರ್ಯಾಕಿಂಗ್ ಯೋಜನೆಗಳಿಗೆ ಸಹಮತ ವ್ಯಕ್ತವಾಗಿದೆ. ಈ ಯೋಜನೆಗಳಿಂದ ಪ್ರಯಾಣಿಕರಿಗೆ ಸುಲಭ ಸಂಚಾರದ ಅನುಭವ ಒದಗಿಸಬಹುದಾಗಿದ್ದು, ಸರಕು-ಸಾಗಣೆ ವೆಚ್ಚ ತಗ್ಗಿಸಿ, ತೈಲ ಆಮದನ್ನು ಕಡಿತಗೊಳಿಸಲು ಮತ್ತು ಇಂಗಾಲದ ಡೈ-ಆಕ್ಸೈಡ್ ಮಟ್ಟ ಇಳಿಸುವ ಮೂಲಕ ಸುಸ್ಥಿರ ಮತ್ತು ಸುಗಮ ರೈಲು ಸಂಚಾರಕ್ಕೆ ನೆರವಾಗಲಿದೆ. ಈ ಯೋಜನೆಗಳ ಒಟ್ಟು ವೆಚ್ಚ ೩ ಸಾವಿರದ ೩೯೯ ಕೋಟಿ ರೂಪಾಯಿಯಾಗಿದ್ದು, ೨೦೨೯-೩೦ರ ವೇಳೆಗೆ ಪೂರ್ಣಗೊಳ್ಳಲಿದೆ. ಸಂಪುಟವು ಆಂಧ್ರ ಪ್ರದೇಶದ ಎನ್ ಎಚ್-೬೭ರಡಿಯಲ್ಲಿ ೧೦೮ ಕಿ.ಮೀ ಉದ್ದದ ಬಡ್ವೆಲ್-ನೇಲ್ಲೂರು ಕಾರಿಡಾರ್ ಚತುಷ್ಪಥ ನಿರ್ಮಾಣಕ್ಕೆ ೩ ಸಾವಿರದ ೬೫೩ ಕೋಟಿ ವೆಚ್ಚದ ಯೋಜನೆಗೆ ಅನುಮೋದನೆ ನೀಡಿದೆ. ಈ ಮಾರ್ಗ ಆಂಧ್ರ ಪ್ರದೇಶದ ಮೂವರು ಪ್ರಮುಖ ಕೈಗಾರಿಕಾ ಕಾರಿಡಾರ್‌ಗಳಿಗೆ ಸಂಪರ್ಕ ಒದಗಿಲಿದೆ. ಇದು ಭಾರತದ ಸರಕು ಸಾಗಣೆ ಸೂಚ್ಯಂಕದ ಮೇಲೆ ಸಕಾರಾತ್ಮಕ ಪರಿಣಾಮ ಬೀರುವ ನಿರೀಕ್ಷೆಯಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆಯಿಂದ ಎರಡು ದಿನಗಳ ಕಾಲ ಸಿಕ್ಕಿಂ, ಪಶ್ಚಿಮ ಬಂಗಾಳ, ಬಿಹಾರ ಮತ್ತು ಉತ್ತರಪ್ರದೇಶಗಳಲ್ಲಿ ಪ್ರವಾಸ ಮಾಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅವರು ೭೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಲೋಕಾರ್ಪಣೆ ಮತ್ತು ಶಂಕುಸ್ಥಾಪನೆ ಮಾಡಲಿದ್ದಾರೆ. ಸಿಕ್ಕಿಂ ಭೇಟಿ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಸಿಕ್ಕಿಂ ರಾಜ್ಯದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು, ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಪಶ್ಚಿಮ ಬಂಗಾಳಕ್ಕೆ ತೆರಳಲಿರುವ ಅವರು, ಅಲಿಪುರ್ದ್ವಾರ್ ಅನಿಲ ವಿತರಾಣಾ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದಾದ ನಂತರ ಬಿಹಾರಗೆ ತರಳಲಿರುವ ಅವರು, ಪಾಟ್ನಾ ವಿಮಾನ ನಿಲ್ದಾಣದಲ್ಲಿ ನಿರ್ಮಿಸಿರುವ ಹೊಸ ಟರ್ಮಿನಲ್ ಉದ್ಘಾಟನೆ ಮಾಡಲಿದ್ದಾರೆ. ಮರುದಿನ ಬಿಹಾರದ ಕಾರಾಕಟ್‌ನಲ್ಲಿ ಸುಮಾರು ೪೮ ಸಾವಿರದ

೫೨೦ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಆ ನಂತರ ಅವರು ಉತ್ತರಪ್ರದೇಶಕ್ಕೆ ಭೇಟಿ ನೀಡಲಿದ್ದು, ಕಾನ್‌ಪುರ ನಗರದಲ್ಲಿ ಸುಮಾರು ೨೦ ಸಾವಿರದ ೯೦೦ ಕೋಟಿ ರೂಪಾಯಿ ವೆಚ್ಚದ ಬಹು ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.

<><><><>

೨೦೨೪-೨೫ ನೇ ಆರ್ಥಿಕ ವರ್ಷದಲ್ಲಿ ಭಾರತಕ್ಕೆ ೮೧.೦೪ ಶತಕೋಟಿ ಅಮೆರಿಕನ್ ಡಾಲರ್‌ನಷ್ಟು ಮೌಲ್ಯದ ವಿದೇಶಿ ನೇರ ಬಂಡವಾಳ ಹರಿದುಬಂದಿದೆ. ೨೦೨೩-೨೪ನೇ ಆರ್ಥಿಕ ವರ್ಷಕ್ಕೆ ಹೋಲಿಸಿದರೆ, ವಿದೇಶಿ ನೇರಬಂಡವಾಳ ಹೂಡಿಕೆ ಪ್ರಮಾಣದಲ್ಲಿ ಶೇಕಡ ೧೪ ರಷ್ಟು ಏರಿಕೆ ಕಂಡುಬಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಹೇಳಿಕೆಯಲ್ಲಿ ತಿಳಿಸಲಾಗಿದೆ. ೨೦೨೪-೨೫ನೇ ಸಾಲಿನಲ್ಲಿ ಸೇವಾ ವಲಯಕ್ಕೆ ಅತ್ಯಂತ ಹೆಚ್ಚಿನ ವಿದೇಶಿ ನೇರ ಬಂಡವಾಳ ಹರಿದು ಬಂದಿದ್ದು, ಒಟ್ಟಾರೆ ಬಂಡವಾಳದಲ್ಲಿ ಶೇಕಡ ೧೯ ರಷ್ಟು ಈ ವಲಯದಲ್ಲಿ ಹೂಡಿಕೆ ಮಾಡಲಾಗಿದೆ. ನಂತರದ ಸ್ಥಾನದಲ್ಲಿ ಕಂಪ್ಯೂಟರ್ ಸಾಫ್ಟ್‌ವೇರ್ ಮತ್ತು ಹಾರ್ಡ್‌ವೇರ್ ವಲಯಗಳಿದ್ದು, ಈ ವಲಯಗಳಿಗೆ ಶೇಕಡ ೧೬ ರಷ್ಟು ಬಂಡವಾಳ ಹೂಡಿಕೆಯಾಗಿದೆ.

<><><><>

ಕೃಷಿ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ ರೈತರ ಆದಾಯ ದ್ವಿಗುಣಗೊಳಿಸಬೇಕೆಂಬ ಮಹತ್ವಾಕಾಂಕ್ಷೆಯಿಂದ ನಾಳೆಯಿಂದ ದೇಶಾದ್ಯಂತ 'ವಿಕಸಿತ ಕೃಷಿ ಸಂಕಲ್ಪ' ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಒಡಿಶಾದ ಪುರಿಯಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ದೇಶದ ೭೦೦ ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಈ ಅಭಿಯಾನ ನಡೆಯಲಿದ್ದು, ಜೂನ್ ೧೨ರವರೆಗೆ ಮುಂದುವರಿಯಲಿದೆ. ಅಭಿಯಾನದ ಸಂದರ್ಭದಲ್ಲಿ ಕೇಂದ್ರ ಸಚಿವರು, ಸುಮಾರು ೨೦ ರಾಜ್ಯಗಳಿಗೆ ಭೇಟಿ ನೀಡಲಿದ್ದು, ರೈತರು, ವಿಜ್ಞಾನಿಗಳೊಂದಿಗೆ ನೇರ ಸಂವಾದದಲ್ಲಿ ತೊಡಗುವಂತೆ ಪ್ರೇರೇಪಿಸಲಿದ್ದಾರೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಕರ್ನಾಟಕ ಸೇರಿದಂತೆ ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ, ಜಮ್ಮು, ರಾಜಸ್ಥಾನ, ಗುಜರಾತ್, ಉತ್ತರ ಪ್ರದೇಶ, ಬಿಹಾರ, ಮಹಾರಾಷ್ಟ್ರ, ಹರಿಯಾಣ, ಪಂಜಾಬ್, ಉತ್ತರಾಖಂಡ್, ಅಸ್ಸಾಂ, ಮೇಘಾಲಯ, ಮಧ್ಯಪ್ರದೇಶ, ದೆಹಲಿ ಮತ್ತು ಛತ್ತೀಸ್ ಗಢ ರಾಜ್ಯಗಳಲ್ಲಿ ಸಚಿವರು ಪ್ರವಾಸ ಕೈಗೊಳ್ಳಲಿದ್ದಾರೆ. ವಿವಿಧ ಪ್ರದೇಶಗಳಿಗೆ ನಿರ್ದಿಷ್ಟವಾದ ಪ್ರಮುಖ ಮುಂಗಾರು ಬೆಳೆಗಳಿಗೆ ಆಧುನಿಕ ತಂತ್ರಜ್ಞಾನಗಳ ಬಗ್ಗೆ ರೈತರಿರಲ್ಲಿ ಅರಿವು ಮೂಡಿಸುವುದರ ಜೊತೆಗೆ ಕೇಂದ್ರ ಸರ್ಕಾರಿ

ಯೋಜನೆಗಳು ಮತ್ತು ನೀತಿಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಅಭಿಯಾನದ ಮುಖ್ಯ ಉದ್ದೇಶಗಳಾಗಿವೆ.

<><><>

ಪಾಕಿಸ್ತಾನದ ಗಡಿಯಲ್ಲಿರುವ ಜಿಲ್ಲೆಗಳಲ್ಲಿ ನಾಳೆ ನಾಗರಿಕ ರಕ್ಷಣಾ ಅಣಕು ಕವಾಯತು ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಗುಜರಾತ್, ರಾಜಸ್ಥಾನ, ಪಂಜಾಬ್ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಈ ಅಣಕು ಕವಾಯತು ನಡೆಯಲಿದೆ.  ಅಭ್ಯಾಸದಲ್ಲಿ ಭಾಗವಹಿಸುವವರಿಗೆ ಅಧಿಕಾರಿಗಳು ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಅಗತ್ಯವಿರುವ ಕೌಶಲ್ಯಗಳನ್ನು ಕಲಿಸಲು ಪ್ರಾತ್ಯಕ್ಷಿಕೆಗಳು ಮತ್ತು ತರಬೇತಿ ಅಧಿವೇಶನಗಳನ್ನು ನಡೆಸಲಿದ್ದಾರೆ. ವಿವಿಧ ಧಾರ್ಮಿಕ ಸಂಸ್ಥೆಗಳು, ಸರಕಾರಿ ಇಲಾಖೆಗಳು, ಎನ್‌ಸಿಸಿ ಕ್ಯಾಡೆಟ್‌ಗಳು ಮತ್ತು ಎನ್‌ಎಸ್‌ಎಸ್ ಸ್ವಯಂಸೇವಕರು ಈ ಅಭ್ಯಾಸದಲ್ಲಿ ಭಾಗವಹಿಸಲಿದ್ದಾರೆ.

<><><>

ಸ್ವಾತಂತ್ರ ಹೋರಾಟಗಾರರಾದ ವಿನಾಯಕ್ ದಾಮೋದರ್ ಸಾವರ್ಕರ್ ಅವರ ಜಯಂತಿ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಸಾವರ್ಕರ್ ಅವರು ಭಾರತ ಮಾತೆಯ ಸುಪುತ್ರರಾಗಿದ್ದು, ಬ್ರಿಟೀಷರ ಸರ್ಕಾರ ಅವರಿಗೆ ಕೊಟ್ಟಂತಹ ಕಿರುಕುಳದ ನಡುವೆಯೂ ಅವರಲ್ಲಿ ತಾಯಿ ನಾಡಿನ ಬಗೆಗಿನ ದೇಶಭಕ್ತಿ ಅಚಲವಾಗಿತ್ತು ಎಂದು ಸ್ಮರಿಸಿದ್ದಾರೆ.

<><><>

ಭಾರತದ ಆಪರೇಷನ್ ಸಿಂಧೂರ್ ರಾಜತಾಂತ್ರಿಕ ಸಂಪರ್ಕದ ಭಾಗವಾಗಿ ಜೆಡಿಯು ಸಂಸದ ಸಂಜಯ್ ಝಾ ನೇತೃತ್ವದ ಸರ್ವಪಕ್ಷ ಸಂಸದೀಯ ನಿಯೋಗವು ಇಂದು ಇಂಡೋನೇಷ್ಯಾದ ಜಕಾರ್ತಾ ತಲುಪಿತು. ನಿಯೋಗವು ಇಲ್ಲಿಯವರೆಗೆ ಜಪಾನ್, ದಕ್ಷಿಣ ಕೊರಿಯಾ ಮತ್ತು ಸಿಂಗಾಪುರಕ್ಕೆ ಭೇಟಿ ನೀಡಿದೆ.

<><><>

ಸಿಂಗಾಪುರ ಓಪನ್ ಸೂಪರ್ ೭೫೦ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದ ೩೨ ರ ಸುತ್ತಿನ ಪಂದ್ಯದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಗೆಲುವು ದಾಖಲಿಸಿದೆ. ೪೧ನೇ ಶ್ರೇಯಾಂಕಿತ ಮಲೇಷ್ಯಾದ ಜೋಡಿಯ ವಿರುದ್ದ ಸಾತ್ವಿಕ್ ಮತ್ತು ಚಿರಾಗ್ ಜೋಡಿ ೨೧-೧೬, ೨೧-೧೩ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿತು. ಮಿಶ್ರ ಡಬಲ್ಸ್ ನಲ್ಲಿ ರೋಹನ್ ಕಪೂರ್ ಮತ್ತು ರುತ್ವಿಕಾ ಶಿವಾನಿ ಗಡ್ಡೆ ಜೋಡಿ ಅಮೆರಿಕಾವ ಚೆನ್ ಝಿ ಯಿ ಮತ್ತು ಫ್ರಾನ್ಸೆಸ್ಕಾ ಕಾರ್ಬೆಟ್ ಜೋಡಿಯನ್ನು ಸೋಲಿಸಿತು. ಮಹಿಳಾ ಸಿಂಗಲ್ಸ್ ನಲ್ಲಿ ಆಕರ್ಷಿ

ಕಶ್ಯಪ್ ವಿಶ್ವದ ೪ನೇ ಶ್ರೇಯಾಂಕಿತ ಚೀನಾದ ಹಾನ್ ಯು ವಿರುದ್ಧ ೨೧-೧೭, ೧೩-೨೧, ೭-೨೧ ಸೆಟ್‌ಗಳ ಅಂತರದಿಂದ ಸೋಲನುಭವಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>